# ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ (ಕೆಸ್ಟೆಪ್ಸ್)

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ಸರ್ಕಾರ
#24/2, 'ವಿಜ್ಞಾನ ಭವನ', 21ನೇ ಮುಖ್ಯರಸ್ತೆ,
ಬನಶಂಕರಿ 2ನೇ ಹಂತ, ಬೆಂಗಳೂರು-560 070

---

*ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿಯು* (Karnataka Science and Technology Promotion Society - KSTePS) 2013ರಲ್ಲಿ ಕರ್ನಾಟಕ ಸರ್ಕಾರವು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಡಿಯಲ್ಲಿ, 1960ರ ಸೊಸೈಟಿಗಳ ನೋಂದಣಿ ಕಾಯ್ದೆಯಡಿ ಸ್ಥಾಪಿಸಲಾದ ಒಂದು ಸ್ವಾಯತ್ತ ಸಂಸ್ಥೆಯಾಗಿದೆ. ಕೆಸ್ಟೆಪ್ಸ್‌ನ ಧ್ಯೇಯೋದ್ದೇಶಗಳು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ನೀತಿ ನಿರೂಪಣೆ ಮತ್ತು ಉಪಕ್ರಮಗಳ ರಚನೆ ಹಾಗೂ ಅನುಷ್ಠಾನದ ನೆರವಿಗಾಗಿ ಒಂದು ವ್ಯವಸ್ಥೆಯಾಗಿ ಕಾರ್ಯನಿರ್ವಹಿಸಿ, ರಾಜ್ಯಾದ್ಯಂತ ಇಲಾಖೆಯ ಕಾರ್ಯಕ್ರಮಗಳ ನಿಧಿಗಳ ಹಂಚಿಕೆಗೆ ನೋಡಲ್ ಏಜೆನ್ಸಿಯಾಗಿ ಕಾರ್ಯ ನಿರ್ವಹಿಸುವುದಾಗಿದೆ. ಅಲ್ಲದೆ, ರಾಜ್ಯದ ದೀರ್ಘಾವಧಿ ಅಭಿವೃದ್ಧಿಗೆ ಉಪಯುಕ್ತವಾಗುವಂತಹ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿರುವ ಆದ್ಯತಾ ವಲಯಗಳನ್ನು ಗುರುತಿಸಿ ಅವುಗಳನ್ನು ಅಭಿವೃದ್ಧಿಪಡಿಸುವುದಾಗಿದೆ. ಸೊಸೈಟಿಯು ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಿಂದ ಸದಸ್ಯರುಗಳನ್ನು ಹೊಂದಿದೆ. ವಿಶೇಷ ನಿರ್ದೇಶಕರು (ತಾಂತ್ರಿಕ), ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಇವರು ಸಂಸ್ಥೆಯ ಸದಸ್ಯ ಕಾರ್ಯದರ್ಶಿಗಳು ಹಾಗೂ ವ್ಯವಸ್ಥಾಪಕ ನಿರ್ದೇಶಕರಾಗಿರುತ್ತಾರೆ.

ಕೆಸ್ಟೆಪ್ಸ್ ಸಂಯೋಜಿಸಿದ ಪ್ರಮುಖ ಕಾರ್ಯಕ್ರಮಗಳು ಈ ಕೆಳಗಿನಂತಿವೆ:

1. **ಪ್ರಾದೇಶಿಕ ವಿಜ್ಞಾನ ಕೇಂದ್ರಗಳು**: ವಿಜ್ಞಾನ ಮತ್ತು ತಂತ್ರಜ್ಞಾನ ಆವಿಷ್ಕಾರಗಳನ್ನು ಜನಸಾಮಾನ್ಯರಿಗೆ ಪರಿಚಯಿಸಲು ಹಾಗೂ ವಿದ್ಯಾರ್ಥಿಗಳಲ್ಲಿ ಅದರಲ್ಲೂ ಮುಖ್ಯವಾಗಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಚಿಂತನೆ ಮತ್ತು ವೈಚಾರಿಕತೆಗಳನ್ನು ಬೆಳೆಸಲು ಅನುವಾಗುವಂತೆ ಧಾರವಾಡದ ಕರ್ನಾಟಕ ವಿಶ್ವವಿದ್ಯಾನಿಲಯದ ಆವರಣದಲ್ಲಿ ಹಾಗೂ ಮಂಗಳೂರಿನ ಪಿಲಿಕುಳ ನಿಸರ್ಗಧಾಮದಲ್ಲಿ ಪ್ರಾದೇಶಿಕ ವಿಜ್ಞಾನ ಕೇಂದ್ರಗಳನ್ನು ಭಾರತ ಸರ್ಕಾರದ ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಸ್ಥಾಪಿಸಲಾಗಿದ್ದು, ಈ ಎರಡು ಕೇಂದ್ರಗಳು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆ. ಮೂರನೇ ಪ್ರಾದೇಶಿಕ ವಿಜ್ಞಾನ ಕೇಂದ್ರವನ್ನು ಮೈಸೂರಿನ ವಿಶ್ವವಿದ್ಯಾಲಯದ ಆವರಣದಲ್ಲಿ, ರೂ.14.50 ಕೋಟಿಗಳ ವೆಚ್ಚದಲ್ಲಿ ಭಾರತ ಸರ್ಕಾರದ ರಾಷ್ಟ್ರೀಯ ವಿಜ್ಞಾನ ಸಂಗ್ರಹಾಲಯ ಸಮಿತಿ (ನ್ಯಾಷನಲ್ ಕೌನ್ಸಿಲ್ ಫಾರ್ ಸೈನ್ಸ್ ಮ್ಯೂಸಿಯಂ) ಯ ಸಹಯೋಗದೊಂದಿಗೆ ಸ್ಥಾಪಿಸಲಾಗುತ್ತಿದೆ.






ಚಿತ್ರ 1: ಮಂಗಳೂರಿನ ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರ (ಎಡ ಚಿತ್ರ) ಹಾಗೂ ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರ (ಬಲ ಚಿತ್ರ)

2. **ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳು**: ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳು ಸಣ್ಣ ಪ್ರಮಾಣದ ಪ್ರಾದೇಶಿಕ ವಿಜ್ಞಾನ ಕೇಂದ್ರಗಳಾಗಿದ್ದು, ವಿಜ್ಞಾನವನ್ನು ಜನ ಸಾಮಾನ್ಯರೆಡೆಗೆ ಕೊಂಡೊಯ್ದು, ಜನರನ್ನು ವಿಜ್ಞಾನದ ಕಡೆಗೆ ಕರೆದೊಯ್ಯುವ ದೂರದೃಷ್ಟಿಯೊಂದಿಗೆ ಹಾಗೂ ರಾಜ್ಯಾದ್ಯಂತ ವಿಜ್ಞಾನ ಮತ್ತು ತಂತ್ರಜ್ಞಾನದ ಬೆಳವಣಿಗೆಗಳನ್ನು ಪ್ರಚುರಪಡಿಸಲು ಪ್ರತಿ ಕೇಂದ್ರಕ್ಕೆ ರೂ. 4.00 ಕೋಟಿಗಳ ವೆಚ್ಚದಲ್ಲಿ ರಾಜ್ಯ ಸರ್ಕಾರದ ಸಂಪೂರ್ಣ ಅನುದಾನದೊಂದಿಗೆ, ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ವಿವಿಧ ಹಂತಗಳಲ್ಲಿ ಸ್ಥಾಪಿಸಲಾಗುತ್ತಿದೆ. ಪ್ರಸ್ತುತ ಸಾಲಿನಲ್ಲಿ ರಾಯಚೂರು, ಗೌರಿಬಿದನೂರು (ಚಿಕ್ಕಬಳ್ಳಾಪುರ ಜಿಲ್ಲೆ), ಬಾಗಲಕೋಟೆ ಮತ್ತು ದಾವಣಗೆರೆ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಗಳ ಕಟ್ಟಡ ಕಾಮಗಾರಿಗಳಗೆ ಅನುದಾನ ನೀಡಲಾಗಿದ್ದು, ಇವುಗಳ ಪ್ರಗತಿ ವಿವಿಧ ಹಂತಗಳಲ್ಲಿವೆ.




ಚಿತ್ರ 2. ಕೊಪ್ಪಳ (A), ಬಾಗಲಕೋಟೆ (B) ಹಾಗೂ ಗೌರಿಬಿದನೂರಿನಲ್ಲಿ (C) ಸ್ಥಾಪಿಸಲಾಗುತ್ತಿರುವ ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳು

3. **ತಾರಾಲಯಗಳು**: ಖಗೋಳಶಾಸ್ತ್ರ ಸಂಬಂಧಿತ ಶಿಕ್ಷಣದ ಪರಿಕಲ್ಪನೆಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ, ನಕ್ಷತ್ರ ಮತ್ತು ಗ್ರಹಗಳನ್ನು ಹೊಂದಿದ ರಾತ್ರಿ ಆಕಾಶದ ನೋಟವನ್ನು ಒಳಾಂಗಣದಲ್ಲಿ ಸೃಷ್ಟಿಸುವಂತಹ ವಿಶೇಷ ಗೋಳ ಹಾಗೂ ಆತ್ಯಾಧುನಿಕ ತಂತ್ರಜ್ಞಾನದ ಪ್ರೊಜೆಕ್ಷನ್ ವ್ಯವಸ್ಥೆಯುಳ್ಳ ತಾರಾಲಯವನ್ನು ಮಂಗಳೂರಿನ ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ರೂ. 35.69 ಕೋಟಿಗಳ ವೆಚ್ಚದಲ್ಲಿ ಸ್ಥಾಪಿಸಲಾಗುತ್ತಿದ್ದು, ಡಿಸೆಂಬರ್ 2017ಕ್ಕೆ ಪ್ರಾರಂಭಗೊಳ್ಳಲಿದೆ. ಬೆಂಗಳೂರಿನ ಜವಾಹರಲಾಲ್ ನೆಹರೂ ತಾರಾಲಯದ ನಂತರದ ರಾಜ್ಯದ ಎರಡನೇ ತಾರಾಲಯವಾಗಲಿದ್ದು, ಸದರಿ ತಾರಾಲಯವು ರಾಜ್ಯದ ಮೊದಲ ಅತೀ ದೊಡ್ಡ ತಾರಾಲಯವೂ ಸಹ ಆಗಲಿದೆ.



ಚಿತ್ರ 3: ಮಂಗಳೂರಿನ ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ಸ್ಥಾಪಿಸಲಾಗುತ್ತಿರುವ ಸ್ವಾಮಿ ವಿವೇಕಾನಂದಾ ತಾರಾಲಯ

1989ರಲ್ಲಿ ಅಂದಿನ ಬೆಂಗಳೂರು ಮಹಾನಗರ ಪಾಲಿಕೆಯವರಿಂದ ಸ್ಥಾಪಿಸಲ್ಪಟ್ಟು, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿರುವ ಜವಾಹರ್‌ಲಾಲ್ ನೆಹರು ತಾರಾಲಯವನ್ನು ರೂ. 12.00 ಕೋಟಿಗಳ ವೆಚ್ಚದಲ್ಲಿ ಸುಸಜ್ಜಿತ ಪ್ರೊಜೆಕ್ಷನ್ ವ್ಯವಸ್ಥೆಗಳನ್ನು (ಆಪ್ಟೋಮೆಕಾನಿಕಲ್ ಮತ್ತು 2ಡಿ ಡಿಜಿಟಲ್ ವ್ಯವಸ್ಥೆ) ಅಳವಡಿಸಿ ಜನವರಿ 2017ರಂದು ಉನ್ನತೀಕರಿಸಲಾಗಿದೆ.



ಚಿತ್ರ 4. ಜವಾಹರ್‌ಲಾಲ್ ನೆಹರು ತಾರಾಲಯ

ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಖಗೋಳ ವಿಜ್ಞಾನ ಶಿಕ್ಷಣವನ್ನು ಅವರವರ ಶಾಲೆಗಳಿಗೆ ತೆರಳಿ ಪ್ರದರ್ಶನಗಳನ್ನು ಪ್ರದರ್ಶಿಸುವ ಸಲುವಾಗಿ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ (ಕೆಸ್ಟೆಪ್ಸ್) ಸಂಸ್ಥೆಯಿಂದ ಪ್ರಾಯೋಗಿಕವಾಗಿ ಸಂಚಾರಿ ತಾರಾಲಯ ಯೋಜನೆಯನ್ನು ದಿನಾಂಕ: 23 ಡಿಸೆಂಬರ್, 2016 ರಿಂದ 22 ಫೆಬ್ರವರಿ, 2017 ರ ವರೆಗೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲಾಗಿತ್ತು. ಎರಡು ತಿಂಗಳ ಅವಧಿಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಮೂರು ತಾಲ್ಲೂಕಿನಲ್ಲಿ ಸಂಚರಿಸಿದ ಸಂಚಾರಿ ತಾರಾಲಯವು ಸುಮಾರು 10,000 ಗಿಂತಲೂ ಹೆಚ್ಚು ಪ್ರೌಢಶಾಲಾ ವಿದ್ಯಾರ್ಥಿಗಳ ಪ್ರದರ್ಶನ ವೀಕ್ಷಣೆಗೆ ಸಾಕ್ಷಿಯಾಗಿದೆ ಹಾಗೂ ಎಲ್ಲಾ ವಿದ್ಯಾರ್ಥಿಗಳಿಂದ ಮತ್ತು ಶಿಕ್ಷಕವೃಂದವರಿಂದ ಉತ್ತಮವಾದ ಪ್ರಶಂಸನೀಯ ಪ್ರತಿಕ್ರಿಯೆಗಳು ವ್ಯಕ್ತವಾಗಿದೆ. ಈ ಉತ್ತಮ ಪ್ರತಿಕ್ರಿಯೆಗೆ ಅನುಗುಣವಾಗಿ, ಸನ್ಮಾನ್ಯ ಮುಖ್ಯಮಂತ್ರಿಯವರು 2017-'18 ರ ಶೈಕ್ಷಣಿಕ ವರ್ಷದಿಂದ

ಪ್ರತಿ ಆರು ಜಿಲ್ಲೆಗಳಿಗೆ ಒಂದರಂತೆ ಸಂಚಾರಿ ತಾರಾಲಯ ಯೋಜನೆಯನ್ನು ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುವುದೆಂದು ಘೋಷಿಸಿರುತ್ತಾರೆ.

ಸಂಚಾರಿ ತಾರಾಲಯದ ಪ್ರಮುಖ ವೈಶಿಷ್ಟ್ಯತೆಗಳೆಂದರೆ, ಸುಮಾರು 30 ರಿಂದ 40 ವಿದ್ಯಾರ್ಥಿಗಳು ಕುಳಿತು ಪ್ರದರ್ಶನ ನೋಡಬಹುದಾದ, ಗಾಳಿ ತುಂಬುವುದರ ಮೂಲಕ ರಚಿತವಾದ ಗೊಮ್ಮಟ ಹಾಗೂ ಖಗೋಳ ವಿಜ್ಞಾನದ Full dome ಪ್ರದರ್ಶನಗಳು ಹಾಗೂ STEM ವಿಡಿಯೋಗಳನ್ನು 360 ಡಿಗ್ರಿಯಲ್ಲಿ ಪ್ರೊಜೆಕ್ಟ್ ಮಾಡಿ 180 ಡಿಗ್ರಿಯಲ್ಲಿ ವೀಕ್ಷಿಸಬಹುದಾದ ಫಿಶ್-ಐ ಲೆನ್ಸ್ ಜೋಡಿಸಿರುವ ಅತ್ಯಾಧುನಿಕ ಡಿಜಿಟಲ್ ಪ್ರೊಜೆಕ್ಟರನನ್ನು ಹೊಂದಿದೆ.




ಚಿತ್ರ 5. ಸಂಚಾರಿ ತಾರಾಲಯ

4. **ತರಬೇತುದಾರರಿಗೆ ತರಬೇತಿ ಕಾರ್ಯಕ್ರಮ**: ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆಯಲ್ಲಿರುವ ಭಾರತೀಯ ವಿಜ್ಞಾನ ಸಂಸ್ಥೆಯ ಎರಡನೇ ಕ್ಯಾಂಪಸ್‌ನಲ್ಲಿ ಸ್ಥಾಪಿಸಲಾಗಿರುವ "ಪ್ರತಿಭಾ ಅಭಿವೃದ್ಧಿ ಕೇಂದ್ರವು ಪ್ರೌಢಶಾಲಾ ಶಿಕ್ಷಕರುಗಳಿಗೆ ವಿಜ್ಞಾನದಲ್ಲಿನ ಸೈದ್ಧಾಂತಿಕ ಹಾಗೂ ಪ್ರಯೋಗಿಕ ಅಂಶಗಳನ್ನು ಅರ್ಥೈಸಿಕೊಳ್ಳುವ ಮೂಲಕ ಜ್ಞಾನಾಭಿವೃದ್ಧಿಗೆ ಸಹಕಾರಿಯಾಗುವಂತಹ ವಸತಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ನಿಟ್ಟಿನಲ್ಲಿ ಪ್ರಮುಖ ಪಾತ್ರವಹಿಸುತ್ತಿದೆ. ಸುಮಾರು 100 ಪ್ರೌಢಶಾಲೆಗಳ ವಿಜ್ಞಾನ ಶಿಕ್ಷಕರುಗಳು ಭಾರತೀಯ ವಿಜ್ಞಾನ ಸಂಸ್ಥೆ ಹಾಗೂ ಇತರೆ ಸಂಶೋಧನಾ ಸಂಸ್ಥೆಗಳ ಪರಿಣಿತರಿಂದ ಪ್ರತಿ ತಿಂಗಳು 10 ದಿನಗಳ ವಸತಿಯುಕ್ತ ತರಬೇತಿ ನೀಡಲಾಗುತ್ತಿದೆ. ಸದರಿ ತರಬೇತಿಯ ಮಾದರಿಯನ್ನು ದೇಶದ ಅತ್ಯುತ್ತಮ ಮಾದರಿಯೆಂದು ಪರಿಗಣಿಸಲಾಗಿದೆ. 2016-'17ರ ಆರ್ಥಿಕ ವರ್ಷದಲ್ಲಿ ಸುಮಾರು 1100 ಪ್ರೌಢಶಾಲಾ ಶಿಕ್ಷಕರು ತರಬೇತಿ ಪಡೆದಿರುತ್ತಾರೆ.



ಚಿತ್ರ 6. ತರಬೇತುದಾರರಿಗೆ ತರಬೇತಿ ಕಾರ್ಯಕ್ರಮ

5. **ಬೆಂಗಳೂರಿನಲ್ಲಿ ವಿಜ್ಞಾನ ಗ್ಯಾಲರಿ**: ವಿಜ್ಞಾನ ಗ್ಯಾಲರಿ ಬೆಂಗಳೂರು ರಾಜ್ಯ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ಐರ್ಲೆಂಡ್‌ನ ಡಬ್ಲಿನ್‌ನಲ್ಲಿರುವ ಸೈನ್ಸ್ ಗ್ಯಾಲರಿ ಅಂತಾರಾಷ್ಟ್ರೀಯ ಪ್ರತಿಷ್ಠಾನದ ಒಡಂಬಡಿಕೆಯೊಂದಿಗೆ ಬೆಂಗಳೂರಿನಲ್ಲಿರುವ ಭಾರತೀಯ ವಿಜ್ಞಾನ ಸಂಸ್ಥೆ, ರಾಷ್ಟ್ರೀಯ ಜೈವಿಕ ವಿಜ್ಞಾನ ಕೇಂದ್ರ, ಸೃಷ್ಟಿ ಕಲಾ, ವಿನ್ಯಾಸ ಮತ್ತು ತಂತ್ರಜ್ಞಾನ ಸಂಸ್ಥೆಗಳ ಶೈಕ್ಷಣಿಕ ಪಾಲುದಾರಿಕೆಗಳೊಂದಿಗೆ ಸ್ಥಾಪಿಸುತ್ತಿರುವ ಒಂದು ಪ್ರಮುಖ ಯೋಜನೆಯಾಗಿದೆ. ಈ ವಿಜ್ಞಾನ ಗ್ಯಾಲರಿಯು ಯುವಕರಿಗೆ ವಿಜ್ಞಾನ ಜಗತ್ತಿನಲ್ಲಿ ಕಲೆ ಮತ್ತು ಸಂಸ್ಕೃತಿಗಳ ಸಂಗಮಗಳ ಆವಿಷ್ಕಾರಗಳು ಹಾಗೂ ವಿಜ್ಞಾನದಲ್ಲಿನ ನವೀನ ಅವಕಾಶಗಳನ್ನು ಒದಗಿಸುವ ಉದ್ದೇಶವನ್ನು ಹೊಂದಿದೆ. ಸದರಿ ವಿಜ್ಞಾನ ಗ್ಯಾಲರಿಯನ್ನು ಸ್ಥಾಪಿಸಲು ಸರ್ಕಾರವು ಹೆಬ್ಬಾಳದ ಭಾರತೀಯ ಪಶುಸಂಗೋಪನಾ ಸಂಸ್ಥೆಯ ಆವರಣದಲ್ಲಿ 1 ಎಕರೆ 26 ಗುಂಟೆ ಜಾಗವನ್ನು ನೀಡಿದೆ. ಗ್ಯಾಲರಿಯ ಕಟ್ಟಡದ ವಾಸ್ತುಶಿಲ್ಪಿಯನ್ನು ಆಯ್ಕೆ ಮಾಡಲಾಗಿದ್ದು, ಮುಂದಿನ ಸಾಲಿನಲ್ಲಿ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

6. **ವಿಜ್ಞಾನ ಮತ್ತು ತಂತ್ರಜ್ಞಾನ ದಾರ್ಶನಿಕ ಸಮೂಹ**: ಸರ್ಕಾರವು ವಿಜ್ಞಾನ ಮತ್ತು ತಂತ್ರಜ್ಞಾನ ದಾರ್ಶನಿಕ ಸಮೂಹವನ್ನು 2008 ರಲ್ಲಿ ಖ್ಯಾತ ವಿಜ್ಞಾನಿ ಭಾರತರತ್ನ ಪ್ರೊ. ಸಿ. ಎನ್. ಆರ್. ರಾವ್, ಎಫ್.ಆರ್.ಎಸ್., ರಾಷ್ಟ್ರೀಯ ಸಂಶೋಧನಾ ಪ್ರಾಧ್ಯಾಪಕರು ಹಾಗೂ ಗೌರವಾನ್ವಿತ ಅಧ್ಯಕ್ಷರು, ಜೆ.ಎನ್.ಸಿ.ಎಸ್.ಎ.ಆರ್., ರವರ ಅಧ್ಯಕ್ಷತೆಯಲ್ಲಿ ರಚಿಸಲಾಯಿತು. ವಿಜ್ಞಾನ ಮತ್ತು ತಂತ್ರಜ್ಞಾನ ದಾರ್ಶನಿಕ ಸಮೂಹವು ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜಾನ ಮತ್ತು ತಂತ್ರಜ್ಞಾನ ಇಲಾಖೆಯಡಿ, ರಾಜ್ಯದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಯೋಜನೆಗಳ ಸಂಯೋಜನೆ ಹಾಗೂ ಅನುಷ್ಠಾನಕ್ಕೆ ಮಾರ್ಗದರ್ಶನ ನೀಡುವ ಸರ್ವೋನ್ನತ ಮಂಡಳಿಯಾಗಿ ಕಾರ್ಯನಿರ್ವಹಿಸುತ್ತದೆ.

   2016-17ನೇ ಆರ್ಥಿಕ ಸಾಲಿನ ದಾರ್ಶನಿಕ ಸಮೂಹದಿಂದ ಕೈಗೊಂಡ ಪ್ರಮುಖ ಯೋಜನೆಗಳು ಈ ಕೆಳಕಂಡಂತಿವೆ:

   **ಅ) ವಿಜ್ಞಾನ, ಇಂಜಿನಿಯರಿಂಗ್ ಮತ್ತು ವೈದ್ಯಕೀಯದ ಶ್ರೇಷ್ಠ ಕೇಂದ್ರಗಳ ಸ್ಥಾಪನೆ (CESEM):** ವಿಜ್ಞಾನ, ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಕ್ಷೇತ್ರದ ಶ್ರೇಷ್ಠ ಕೇಂದ್ರಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದೊಂದಿಗೆ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡಲಾಗುತ್ತಿದೆ.

   **ಆ) ವಿಜ್ಞಾನ ಮತ್ತು ಇಂಜಿನಿಯರಿಂಗ್ ಶಿಕ್ಷಣದ ಸೃಜನಶೀಲ ಕೇಂದ್ರಗಳ ಸ್ಥಾಪನೆ (CISEE):** ವಿಜ್ಞಾನ ಮತ್ತು ಇಂಜಿನಿಯರಿಂಗ್ ಶಿಕ್ಷಣದ ಸೃಜನಶೀಲ ಕೇಂದ್ರಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದೊಂದಿಗೆ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡಲಾಗುತ್ತಿದ್ದು.

   **ಇ) ಯುವ ವಿಜ್ಞಾನಿಗಳಿಗೆ ಸಂಶೋಧನೆಗಾಗಿ ಮೂಲಧನ (SMYSR):** ಯುವ ಬೋಧಕರಿಗೆ ಸಂಶೋಧನಾ ಅನುದಾನ ನೀಡಿ, ಆ ಮೂಲಕ ತಮ್ಮ ಕ್ಷೇತ್ರಗಳಲ್ಲಿ ವಿಜ್ಞಾನ ಸಂಶೋಧನೆಗೆ ತೊಡಗಿಸಿಕೊಳ್ಳುವಂತೆ ಪ್ರೋತ್ಸಾಹಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ.

   **ಈ) ಕರ್ನಾಟಕದ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದ ಮೂಲ ಸೌಕರ್ಯಾಭಿವೃದ್ಧಿಗೆ ನಿಧಿ (K-FIST):** ರಾಜ್ಯದಲ್ಲಿನ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಸಂಶೋಧನೆಗೆ ಪೂರಕವಾದ ಮೂಲ ಸೌಕರ್ಯಗಳ ಬಲವರ್ಧನೆಗಾಗಿ ಅನುದಾನದ ನೆರವನ್ನು ಒದಗಿಸುವುದು ಕೆ-ಫಿಸ್ಟ್ ಕಾರ್ಯಕ್ರಮದ ಉದ್ದೇಶವಾಗಿದೆ.

ಉ) **ಪ್ರತಿಭಾವಂತ ಶಿಕ್ಷಕರ ಸಂಶೋಧನೆಗಾಗಿ ಅನುದಾನ (RFTT):** ವಿಜ್ಞಾನ ಮತ್ತು ಇಂಜಿನಿಯರಿಂಗ್ ಕಾಲೇಜಿನ ಶಿಕ್ಷಕರಿಗೆ ಸಂಶೋಧನೆಯನ್ನು ಕೈಗೆತ್ತಿಕೊಳ್ಳಲು ಉತ್ತೇಜಿಸಲು ನೆರವು ನೀಡುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ.

ಊ) **ಸಂಶೋಧನಾ ಪ್ರಬಂಧಗಳಿಗೆ ಪ್ರಶಸ್ತಿ (ARP)-** ರಾಜ್ಯದಲ್ಲಿನ ಕಾಲೇಜು, ವಿಶ್ವವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆಗಳಲ್ಲಿ ವಿಜ್ಞಾನ, ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಕ್ಷೇತ್ರಗಳಲ್ಲಿ ಗುಣಮಟ್ಟದ ಸಂಶೋಧನಾ ಪ್ರಬಂಧಗಳನ್ನು ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಪತ್ರಿಕೆಗಳಲ್ಲಿ ಪ್ರಕಟಿಸಿದ ಅಧ್ಯಾಪಕರುಗಳನ್ನು ಉತ್ತೇಜಿಸಿ, ಪ್ರಶಸ್ತಿ ನೀಡುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ.

2016-'17 ರಲ್ಲಿ ಆಹ್ವಾನಿಸಲಾದ ಪ್ರಸ್ತಾವನೆಗೆ ಉನ್ನತ ಶಿಕ್ಷಣ ಸಂಸ್ಥೆಗಳಿಂದ ಸುಮಾರು 1350 ಪ್ರಸ್ತಾವನೆಗಳು ಸ್ವೀಕೃತವಾಗಿದ್ದು, ಫಲಾನುಭವಿಗಳನ್ನು ಆಯ್ಕೆ ಮಾಡುವ ಸಲುವಾಗಿ ಮೌಲ್ಯಮಾಪನೆ ನಡೆಸಲಾಗುತ್ತಿದೆ.

7. **ವಿಶೇಷ ಅಭಿವೃದ್ಧಿ ಯೋಜನೆ:** ರಾಜ್ಯದಲ್ಲಿ ಅಸಮತೋಲನವನ್ನು ಹೊಂದಿದ ಪ್ರಾದೇಶಗಳಲ್ಲಿ ಸಮತೋಲಿತ ಅಭಿವೃದ್ಧಿ ಸಾಧಿಸುವ ನಿಟ್ಟಿನಲ್ಲಿ, ಅಸಮತೋಲನೆ ನಿವಾರಣೆಗಾಗಿ ರಚಿಸಲಾದ ಉನ್ನತ ಮಟ್ಟದ ಸಮಿತಿಯು (High Powered Committee for Redressal of Regional Imbalances-HPCRRI) ಸೂಚಿಸಿದಂತೆ ವಿಶೇಷ ಅಭಿವೃದ್ಧಿ ಯೋಜನೆಯನ್ನು ಅನುಷ್ಠಾನಗೊಳಸಲು ಕೆಸ್ಟೆಪ್ಸ್ ಕಾರ್ಯನಿರ್ವಹಿಸುತ್ತಿದೆ. ಈ ಯೋಜನೆಯಡಿ ವಿವಿಧ ಸಂಸ್ಥೆಗಳು ಹಲವಾರು ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿದ್ದು, ಅವುಗಳ ವಿವರ ಈ ಕೆಳಕಂಡಂತಿದೆ.

**ಎಸ್‌ಡಿಪಿ ಶಿಷ್ಯವೇತನ:** ಪ್ರಸ್ತುತ ವರ್ಷವು ವಿಜ್ಞಾನದಲ್ಲಿ ಉನ್ನತ ಶಿಕ್ಷಣದೆಡೆಗೆ ವಿದ್ಯಾರ್ಥಿಗಳನ್ನು ಆಕರ್ಷಿಸಲು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ವಿಜ್ಞಾನದ ಪದವಿ ವಿದ್ಯಾರ್ಥಿಗಳಿಗೆ 810 ಶಿಷ್ಯವೇತನವನ್ನು ನೀಡಿದೆ.

**ವಿಜ್ಞಾನ ಮತ್ತು ತಂತ್ರಜ್ಞಾನ ಸಮ್ಮೇಳನಗಳು:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಬಳ್ಳಾರಿಯಲ್ಲಿ ಮಾರ್ಚ್ 8 ಮತ್ತು 9, 2017 ರಂದು *ಸಮಾಜ ಮತ್ತು ಆರ್ಥಿಕತೆ ಮೇಲೆ ವಿಜ್ಞಾನ ಮತ್ತು ತಂತ್ರಜ್ಞಾನದ ಪರಿಣಾಮಗಳು* ವಿಷಯಾಧರಿತ ಸಮ್ಮೇಳನವನ್ನು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಆಯೋಜಿಸಲಾಗಿದ್ದು, ಸುಮಾರು 800 ಜನ ಪ್ರತಿನಿಧಿಗಳು ಭಾಗವಹಿಸಿರುತ್ತಾರೆ.

**ಮಿನಿ ವಿಜ್ಞಾನ ಸಂಪನ್ಮೂಲ ಕೇಂದ್ರಗಳು:** 2015-16 ರಲ್ಲಿ ಹಿಂದುಳಿದ ಪ್ರದೇಶಗಳಲ್ಲಿ ಸ್ಥಾಪಿಸಲಾದ ಆರು ಮಿನಿ ವಿಜ್ಞಾನ ಸಂಪನ್ಮೂಲ ಕೇಂದ್ರಗಳ ಉನ್ನತೀಕರಣ ಹಾಗೂ ನಿರ್ವಹಣೆಗೆ ಅನುದಾನ ಒದಗಿಸಲಾಗಿದೆ.

**ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳು:** ರಾಯಚೂರು, ಕೊಪ್ಪಳ, ಗೌರಿಬಿದನೂರು (ಚಿಕ್ಕಬಳ್ಳಾಪುರ ಜಿಲ್ಲೆ), ವಿಜಯಪುರ, ಹಾವೇರಿ, ಯಾದಗಿರಿ ಹಾಗೂ ಚಾಮರಾಜನಗರ ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳ ಸ್ಥಾಪನೆ/ಉನ್ನತೀಕರಣವನ್ನೂ ಸಹ ಎಸ್‌ಡಿಪಿ ಯಡಿ ಕೈಗೊಳ್ಳಲಾಗುತ್ತಿದ್ದು, ಯೋಜನೆ ಪ್ರಗತಿಯಲ್ಲಿದೆ.

**ವಿಜ್ಞಾನ ವಾಹಿನಿ ಕಾರ್ಯಕ್ರಮ**: ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್, ಹೆಚ್.ಡಿ.ಕೋಟೆ, ಮೈಸೂರು, ವಿಜ್ಞಾನ ವಾಹಿನಿ ಕಾರ್ಯಕ್ರಮದ ಅಡಿಯಲ್ಲಿ ವಿಜ್ಞಾನದಲ್ಲಿ ಪ್ರಯೋಗಗಳನ್ನು ಹಾಗೂ ಸಂಶೋಧನೆಗಳನ್ನು ಕೈಗೊಳ್ಳಲು 'ಸೆಂಟರ್ ಆಫ್ ಇನೋವೇಶನ್' ಸ್ಥಾಪಿಸುವ ಮೂಲಕ ಉತ್ತಮ ವೇದಿಕೆಯನ್ನು ಕಲ್ಪಿಸಿದೆ. ಈ ಸಂಶೋಧನಾ ಕೇಂದ್ರವು ಗ್ರಂಥಾಲಯ ಹಾಗೂ ತರಬೇತಿಯ ಸೌಲಭ್ಯಗಳನ್ನು ವಿದ್ಯಾರ್ಥಿಗಳಗೆ ಹಾಗೂ ಶಿಕ್ಷಕರಿಗೆ ಒದಗಿಸುತ್ತದೆ. ಈ ಸಂಸ್ಥೆಯು ಆಕಾಶವಾಣಿಯ ಮೂಲಕ ದೈನಂದಿನ ಜೀವನದಲ್ಲಿ ವಿಜ್ಞಾನದ ಬಗ್ಗೆ ಜನ ಸಮುದಾಯದಲ್ಲಿ ಅರಿವು ಉಂಟು ಮಾಡುವ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಸೆಂಟರ್ ಆಫ್ ಇನೋವೇಶನ್ ನವೀನ ಪರಿಕಲ್ಪನೆಗಳನ್ನು ಹೊಂದಿರುವ ಎಲ್ಲಾ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಸಮುದಾಯದ ಸದಸ್ಯರುಗಳಗೆ ಪ್ರಾಯೋಗಿಕವಾದ ವೇದಿಕೆಯಾಗಿದ್ದು, ಸೃಜನಶೀಲತೆ ಹಾಗೂ ಕಲ್ಪನೆಗಳನ್ನು ಬೆಳೆಸುವಲ್ಲಿ ಪ್ರೋತ್ಸಾಹಿಸುತ್ತದೆ. ಈ ಕೇಂದ್ರದ ಊನ್ನತೀಕರಣಕ್ಕೆ ಅನುದಾನ ಒದಗಿಸಲಾಗಿದೆ.

**ವಿಜ್ಞಾನ ಜನಸಮೂಹ ಹಾಗೂ ಶೈಕ್ಷಣಿಕ ಕಾರ್ಯಕ್ರಮಗಳು**: ರಾಜ್ಯದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿನ ಬೆಳವಣಿಗೆಗಳನ್ನು ಜನಸಾಮಾನ್ಯರಿಗೆ ಹಾಗೂ ವಿದ್ಯಾರ್ಥಿಗಳಗೆ ತಲುಪಿಸಿ, ಪಸರಿಸಲು ಕರ್ನಾಟಕದಾದ್ಯಂತ ಹಲವಾರು ವಿಜ್ಞಾನ ಜನಸಮೂಹ ಹಾಗೂ ಶೈಕ್ಷಣಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅಲ್ಲದೇ, ಪ್ರಖ್ಯಾತ ವಿಜ್ಞಾನಿಗಳು ಹಾಗೂ ಸಂಪನ್ಮೂಲ ವ್ಯಕ್ತಿಗಳ ಉಪನ್ಯಾಸಗಳೊಂದಿಗೆ ವಿಜ್ಞಾನ ಮತ್ತು ತಂತ್ರಜ್ಞಾನ ಸಂಬಂಧಿತ ವಾರ್ಷಿಕ ಸಮ್ಮೇಳನಗಳನ್ನು ಸಹ ನಿಯಮಿತವಾಗಿ ಪ್ರಸ್ತುತ ವರ್ಷ ಹಮ್ಮಿಕೊಳ್ಳಲಾಗಿದೆ.